**ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ. ದ. ನ್ಯಾ.ದಂ.ನ್ಯಾಯಾಲಯ,**

**ಶಹಾಪೂರ.**

CW 3 PW-2

ಸಿ.ಸಿ. ನಂ. 253/2025

| | |
|---|---|
| ಹೆಸರು | ಃ ಮಲ್ಲಿಕಾರ್ಜುನ |
| ಗಂಡನ ಹೆಸರು | ಃ ನಿಂಗಪ್ಪ |
| ವಯಸ್ಸು | ಃ 35 ವರ್ಷ |
| ಉದ್ಯೋಗ | ಃ ಕೂಲಿ |
| ವಾಸ | ಃ ಶಖಾಪೂರ |

ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು. ದಿನಾಂಕಃ 24-03-2026

ಮುಖ್ಯ ವಿಚಾರಣೆ ಃ ಸಹಾಯಕ ಸರಕಾರಿ ಅಭಿಯೋಜಕರವರಿಂದ ಃ

ಚಾಸಾ-1 ಮತ್ತು 2 ರವರ ಪರಿಚಯ ಇರುವುದಿಲ್ಲ. ಆರೋಪಿತನ ಪರಿಚಯ ಇರುವುದಿಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ ಹಾಗೂ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ಪೊಲೀಸರು ಹೇಳಿದ ಮೇರೆಗೆ ಒಂದು ದಾಖಲೆಗೆ ಸಹಿ ಮಾಡಿರುತ್ತೇನೆ. ಸದರಿ ದಾಖಲೆ ಪಂಚನಾಮೆ ಆಗಿದ್ದು ಅದನ್ನು ಈಗ ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾುತು

**(ಈ ಹಂತದಲ್ಲಿ ಸ.ಸ.ಅ. ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದರು. ಅನುಮತಿ ಕೊಟ್ಟಿದೆ)**

**ಪಾಟೀ ಸವಾಲುಃ ಸ.ಸ.ಅ. ರವರಿಂದಃ**

2. ದಿಃ 30-01-2025 ರಂದು ರಾತ್ರಿ 8.45 ರ ಸಮಯದಲ್ಲಿ ನಾನು ಹಾಗೂ ಚಾಸಾ2 ರವರು ಭೀ-ಗುಡಿಯ ಬಾಪುಗೌಡ ಚೌಕನಲ್ಲಿ ನಿಂತಿದ್ದಾಗ ಪೊಲೀಸರು ನಮ್ಮನ್ನು ಘಟನಾ ಸ್ಥಳಕ್ಕೆ ಕರೆಸಿ ರಾತ್ರಿ 9.10 ರಿಂದ 10.10 ವರೆಗೆ ನಿಪಿ.1 ರಂತೆ ಪಂಚನಾಮೆಯನ್ನು ಮಾಡಿ ನಮ್ಮಗಳು ಸಹಿಗಳನ್ನು ಪಡೆದಿರುತ್ತಾರೆ ಹಾಗೂ ಎಲ್ಲಾ ಆರೋಪಿತರಿಂದ ಒಟ್ಟು ರೂ.72,300/- ಹಣವನ್ನು ಹಾಗೂ 52 ಇಸ್ಪೀಟ ಎಲೆಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪಂಚನಾಮೆ ಎಲ್ಲಾ ವಿಷಯಗಳು ಗೊತ್ತಿದ್ದರೂ ಸಹ ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿಗಳ ಪರವಾಗಿಃ-</u>**

-ಇಲ್ಲ-

(ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಿದೆ)

ಓ.ಹೇ.ಕೆ.ಸ.ಇದೆ.

ಹಿರಿಯ ಸಿವಿಲ್
ನ್ಯಾಯಾಧೀಶರು,
ಶಹಾಪೂರ.